ಓಎಸ್ ನಂಬರ್: 315/2021

ಪಿಡಬ್ಲ್ಯೂ:1

**ಸಾಕ್ಷಿಯನ್ನು ಕರೆಸಿ ದಿನಾಂಕಃ 19.04.2022 ರಂದು ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ- ವಾದಿಯರ ಪರ ಶ್ರೀ. ಆರ್.ಎಮ್.ಆರ್ ವಕೀಲರಿಂದಃ-**

ನಾನು ಈ ದಿನ ನ್ಯಾಯಾಲಯದಲ್ಲಿ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ.

ಓ.ಎಸ್ ನಂ.60/1995 ನೇದರಲ್ಲಿ ವಾದ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದೇನೆ, ಅದನ್ನು ನಿಪಿ 1 ಎಂದು ಗುರುತಿಸಲಾಯಿತು. ಸದರಿ ದಾವೆಯಲ್ಲಿಯ ತೀರ್ಪಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು ಗುರುತಿಸಲಾಯಿತು. ದಾವಾ ಜಮೀನು ಸರ್ವೇ ನಂ. 28/5 ರ 2021-22 ನೇ ಸಾಲಿನ ಗೇಣಿ ಮತ್ತು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 3 ಎಂದು ಗುರುತಿಸಲಾಯಿತು. ಹಕ್ಕು ದಾಖಲೆ ಸಂಖ್ಯೆಃ 163-15/94-95 ನೇದರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ, ಅದನ್ನು ನಿಪಿ 4 ಎಂದು ಗುರುತಿಸಲಾಯಿತು. ದಿನಾಂಕಃ 05.01.1995 ರಲ್ಲಿ ನನ್ನ ತಂದೆ ಅಮರನಾರಾಯಣರೆಡ್ಡಿ ಇವರು ಬರೆದುಕೊಟ್ಟ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿಯ ಪರ ಶ್ರೀ ಎಂ.ಎಲ್.ವಿ ವಕೀಲರಿಂದಃ**

ಪ್ರತಿವಾದಿಯ ಪರ ವಕೀಲರು ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು, ಪ್ರತಿವಾದಿಯರು ಯಾವುದೇ ಪ್ರತಿವಾದ ಪತ್ರ ಸಲ್ಲಿಸದೇ ಇರುವುದರಿಂದ ವಿನಂತಿಯನ್ನು ತಿರಸ್ಕರಿಸಿ, ಪಾಟೀ ಸವಾಲನ್ನು ಇಲ್ಲವೆಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ** ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತಲೇಖನ ಕೊಟ್ಟು ಓದಿ ನೋಡಿ ಸರಿಪಡಿಸಿ ನಂತರ ಸಹಿ ಮಾಡಲಾಯಿತು)**

ಓಹೇಕೇ ಸರಿಯಿದೆ

ಸಹಿ/-

**(ಹಾಜಿಹುಸೇನಸಾಬ ಯಾದವಾಡ)**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ

ಮುಳಬಾಗಿಲು.